(ಸಭೆಯ ಕಲಾಪವು 11.00 ಗಂಟೆ 11 ನಿಮಿಷಕ್ಕೆ ಪ್ರಾರಂಭವಾಯಿತು. ಮಾನ್ಯ ಸಭಾಧ್ಯಕ್ಷರು ಅಧ್ಯಕ್ಷ ಪೀಠವನ್ನಲಂಕರಿಸಿದರು)

ಅಧ್ಯಕ್ಷರು : ಈಗ ಒಂದು ಪ್ರಕಟಣೆ ಇದೆ.

1. <u>ಪ್ರಕಟಣೆ</u>

ವಿಷಯ : 14ನೇ ವಿಧಾನಸಭೆಯ ಸದಸ್ಯರುಗಳ ವ್ಯಕ್ತಿ ಪರಿಚಯ ಪುಸ್ತಕ ತಯಾರಿಸುವ ಬಗ್ಗೆ.

14ನೇ ವಿಧಾನಸಭೆಯ ಸದಸ್ಯರುಗಳ ವ್ಯಕ್ತಿ ಪರಿಚಯ 'Who is who' ಪುಸ್ತಕವನ್ನು ತಯಾರಿಸುವ ಸಲುವಾಗಿ ಎಲ್ಲಾ ಮಾನ್ಯ ಸದಸ್ಯರುಗಳಿಂದ ಮಾಹಿತಿ ಪಡೆಯುವುದಕ್ಕಾಗಿ ಮಾಹಿತಿಯ ನಮೂನೆಯ ಪ್ರತಿಗಳನ್ನು ಈಗಾಗಲೇ ತಮ್ಮೆಲ್ಲರಿಗೂ ಒದಗಿಸಲಾಗಿದೆ. ಆದರೆ ಹಲವಾರು ಸದಸ್ಯರು ಇದುವರೆವಿಗೂ ಸದರಿ ನಮೂನೆಯನ್ನು ಭರ್ತಿ ಮಾಡಿ ಒದಗಿಸದಿರುವುದು ತಿಳಿದು ಬಂದಿರುತ್ತದೆ. ಆದುದರಿಂದ ಸದರಿ ನಮೂನೆಯನ್ನು ಭರ್ತಿ ಮಾಡಿ ಅದರೊಂದಿಗೆ ತಮ್ಮ ಮೂರು ಭಾವಚಿತ್ರಗಳನ್ನು ಲಗತ್ತಿಸಿ ನೀಡಬೇಕೆಂದು ಕೋರಲಾಗಿದೆ. ವಿಧಾನಸಭೆಯ ಪೂರ್ವ ಮೊಗಸಾಲೆಯಲ್ಲಿ ಸದಸ್ಯರ ಭಾವಚಿತ್ರವನ್ನು ತೆಗೆಯಲಾಗುತ್ತಿದೆ. ಇದುವರೆಗೆ ಭಾವಚಿತ್ರವನ್ನು ತೆಗೆಸಿಕೊಳ್ಳದಿರುವ ಮಾನ್ಯ ಸದಸ್ಯರುಗಳು ಆದ್ಯತೆ ಮೇರೆಗೆ ಭಾವಚಿತ್ರವನ್ನು ತೆಗೆಸಿಕೊಳ್ಳಬೇಕೆಂದು ಈ ಮೂಲಕ ತಿಳಿಯಪಡಿಸಲಾಗಿದೆ.

2. <u>ಕಾರ್ಯದರ್ಶಿಯವರ ವರದಿ</u>

ವಿಷಯ : 13ನೇ ವಿಧಾನ ಸಭೆಯ ಸ್ಥಳೀಯ ಸಂಸ್ಥೆಗಳ ಮತ್ತು ಪಂಚಾಯತ್ ರಾಜ್ ಸಂಸ್ಥೆಗಳ ಎರಡನೇ ವರದಿಯ ಮಂಡನೆ.

ಕಾರ್ಯದರ್ಶಿ : ಮಾನ್ಯ ಅಧ್ಯಕ್ಷರೆ, ಅ) 13ನೇ ವಿಧಾನಸಭೆಯ ಸ್ಥಳೀಯ ಸಂಸ್ಥೆಗಳ ಮತ್ತು ಪಂಚಾಯತ್ ರಾಜ್ ಸಂಸ್ಥೆಗಳ ಸಮಿತಿಯ ಎರಡನೇ ವರದಿಯನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು : ಈಗ ಸಭೆಯ ಮುಂದಿಡಲಾಗುವ 3 ಮತ್ತು 4ನೇ ಪಟ್ಟಿ

3. <u>ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು</u>

ಶ್ರೀ ಟಿ.ಬಿ.ಜಯಚಂದ್ರ (ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಹಾಗೂ ಪಶುಸಂಗೋಪನೆ ಸಚಿವರು) : ಮಾನ್ಯ ಅಧ್ಯಕ್ಷರೆ, ಮಾನ್ಯ ಮುಖ್ಯಮಂತ್ರಿಗಳ ಹೆಸರಿನ ಮುಂದಿರುವ ಕಾಗದ ಪತ್ರಗಳನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಶ್ರೀ ಟಿ.ಬಿ.ಜಯಚಂದ್ರ (ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಹಾಗೂ ಪಶುಸಂಗೋಪನೆ ಸಚಿವರು): ಮಾನ್ಯ ಅಧ್ಯಕ್ಷರೆ, ಶ್ರೀ ಸಿದ್ದರಾಮಯ್ಯ, ಮಾನ್ಯ ಮುಖ್ಯಮಂತ್ರಿಯವರ ಹೆಸರಿನ ಮುಂದಿರುವ ಕಾಗದ ಪತ್ರಗಳನ್ನು ಸಭೆಯ ಮುಂದೆ ಮಂಡಿಸುತ್ತೇನೆ.

1978ರ ಕರ್ನಾಟಕ ನಾಗರಿಕ ಸೇವಾ ಅಧಿನಿಯಮದ ಪ್ರಕರಣ 8(3)ರ ಮೇರೆಗೆ:

ಕರ್ನಾಟಕ ಸಿವಿಲ್ ಸೇವಾ (ಸ್ಪರ್ಧಾತ್ಮಕ ಪರೀಕ್ಷೆ ಮೂಲಕ ನೇರ ನೇಮಕಾತಿ ಮತ್ತು ಆಯ್ಕೆ) (ಸಾಮಾನ್ಯ) ನಿಯಮಗಳು 2006ರ ನಿಯಮ 8,9 ಹಾಗೂ 10ಕ್ಕೆ ತಿದ್ದುಪಡಿ ಮಾಡಿ ದಿನಾಂಕ 29.10.2011ರಂದು ಹೊರಡಿಸಲಾದ ಅಧಿಸೂಚನೆ ಸಂಖ್ಯೆ ಸಿಆಸುಇ 26 ಸೇವನೆ 2011ನ್ನು ಮಂಡಿಸುತ್ತೇನೆ.

ಶ್ರೀ ಟಿ.ಬಿ.ಜಯಚಂದ್ರ (ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಹಾಗೂ ಪಶುಸಂಗೋಪನೆ ಸಚಿವರು): ಮಾನ್ಯ ಅಧ್ಯಕ್ಷರೆ,

I. <u>ಶ್ರೀ ಆರ್.ವಿ.ದೇಶಪಾಂಡೆ (ಉನ್ನತ ಶಿಕ್ಷಣ ಹಾಗೂ ಪ್ರವಾಸೋದ್ಯಮ ಸಚಿವರು)</u> ಅವರ ಹೆಸರಿನ ಮುಂದಿರುವ ಕಾಗದ ಪತ್ರಗಳನ್ನು ಸಭೆಯ ಮುಂದೆ ಮಂಡಿಸುತ್ತೇನೆ.

<u>ಕರ್ನಾಟಕ ವಿಶ್ವವಿದ್ಯಾಲಯಗಳ ಅಧಿನಿಯಮ 2000ದ ಕಲಂ 47(4) ಮೇರೆಗೆ</u> :

1. ಕರ್ನಾಟಕ ವಿಶ್ವವಿದ್ಯಾಲಯದ 2011–12ನೇ ಸಾಲಿನ ವಾರ್ಷಿಕ ಲೆಕ್ಕಪತ್ರ ವರದಿ.

II. <u>ಶ್ರೀ ಟಿ.ಬಿ.ಜಯಚಂದ್ರ (ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಹಾಗೂ</u>

ಪಶುಸಂಗೋಪನೆ ಸಚಿವರು) : ಮಾನ್ಯ ಅಧ್ಯಕ್ಷರೆ, ನನ್ನ ಹೆಸರಿನ ಮುಂದಿರುವ ಕಾಗದ ಪತ್ರಗಳನ್ನು ಸಭೆಯ ಮುಂದೆ ಮಂಡಿಸುತ್ತೇನೆ.

1956ರ ಕಂಪನಿಗಳ ಅಧಿನಿಯಮದ 619 (ಎ) ಮೇರೆಗೆ:

1. ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮ ನಿಯಮಿತದ 2010–11ನೇ ಸಾಲಿನ ವಾರ್ಷಿಕ ವರದಿ (ಲೆಕ್ಕಪರಿಶೋಧನಾ ವರದಿ ಒಳಗೊಂಡಂತೆ)

ಶ್ರೀ ಟಿ.ಬಿ.ಜಯಚಂದ್ರ (ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಹಾಗೂ ಪಶುಸಂಗೋಪನೆ ಸಚಿವರು): ಮಾನ್ಯ ಅಧ್ಯಕ್ಷರೆ,

III. **ಶ್ರೀ ವಿನಯ್‌ಕುಮಾರ್ ಸೊರಕೆ (ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು)** ಅವರ ಹೆಸರಿನ ಮುಂದಿರುವ ಕಾಗದ ಪತ್ರಗಳನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರಗಳ ಕಾಯ್ದೆ 1987ರ ಕಲಂ 49 ಮತ್ತು 48(5)ರ ಮೇರೆಗೆ:

1. ಕೋಲಾರ ನಗರಾಭಿವೃದ್ಧಿ ಪ್ರಾಧಿಕಾರದ 2011–12ನೇ ಸಾಲಿನ ವಾರ್ಷಿಕ ವರದಿ ಮತ್ತು ಲೆಕ್ಕಪರಿಶೋಧನಾ ವರದಿ.

2. ಕೆ.ಜಿ.ಎಫ್ ನಗರಾಭಿವೃದ್ಧಿ ಪ್ರಾಧಿಕಾರದ 2012–13ನೇ ಸಾಲಿನ ವಾರ್ಷಿಕ ವರದಿ.

ಬೆಂಗಳೂರು ಮಹಾನ್ ಪ್ರದೇಶಾಭಿವೃದ್ಧಿ ಪ್ರಾಧಿಕಾರದ ಕಾಯ್ದೆ 1985ರ ಕಲಂ 13ರ ಮೇರೆಗೆ :

1. ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರದ 2012–13ನೇ ಸಾಲಿನ ವಾರ್ಷಿಕ ವರದಿ.

IV. **ಶ್ರೀ ಹೆಚ್.ಕೆ.ಪಾಟೀಲ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು)**: ಮಾನ್ಯ ಅಧ್ಯಕ್ಷರೆ, ನನ್ನ ಹೆಸರಿನ ಮುಂದಿರುವ ಕಾಗದ ಪತ್ರಗಳನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಕರ್ನಾಟಕ ಪಂಚಾಯತ್‌ರಾಜ್ ಅಧಿನಿಯಮ 1993ರ ಅನುಚ್ಛೇದ 253 (3)ರ ಮೇರೆಗೆ:

1. ಕರ್ನಾಟಕ ರಾಜ್ಯದ ತಾಲ್ಲೂಕು ಪಂಚಾಯತಿಗಳ 2010–11ನೇ ಸಾಲಿನ ವಾರ್ಷಿಕ ಲೆಕ್ಕಪತ್ರಗಳ ಕ್ರೋಢೀಕೃತ ಪ್ರತ್ಯೇಕ ಆಡಿಟ್ ವರದಿ

V. **ಶ್ರೀ ವಿ.ಶ್ರೀನಿವಾಸ ಪ್ರಸಾದ್ (ಕಂದಾಯ ಸಚಿವರು.) ಮಾನ್ಯ ಅಧ್ಯಕ್ಷರೆ, ನನ್ನ ಹೆಸರಿನ ಮುಂದಿರುವ ಕಾಗದ ಪತ್ರಗಳನ್ನು ಸಭೆಯ ಮುಂದೆ ಮಂಡಿಸುತ್ತೇನೆ.The Karnataka Improvement Boards (Amendment) Act,**1985 **ಸೆಕ್ಷನ್ 12–ಜಿ(5)**ರ ಮೇರೆಗೆ:

1. ಬಾಗಲಕೋಟೆ ಪಟ್ಟಣ ಅಭಿವೃದ್ಧಿ ಪ್ರಾಧಿಕಾರದ 2011–12ನೇ ಸಾಲಿನ ವಾರ್ಷಿಕ ವರದಿ ಮತ್ತು ಲೆಕ್ಕಪರಿಶೋಧನಾ ವರದಿ.

ಅಧ್ಯಕ್ಷರು : ಮಂಡಿಸಲಾಗಿದೆ.

x x x

ಅಧ್ಯಕ್ಷರು : ಈಗ ಮಾನ್ಯ ತೋಟಗಾರಿಕೆ ಸಚಿವರು ಸದನದಲ್ಲಿ ಒಂದು ಹೇಳಿಕೆಯನ್ನು ನೀಡುತ್ತಾರೆ.

4. ಮಾನ್ಯ ತೋಟಗಾರಿಕೆ ಸಚಿವರಿಂದ ಹೇಳಿಕೆ

ವಿಷಯ : ಉಂಡೆ ಕೊಬ್ಬರಿಗೆ ರಾಜ್ಯ ಸರ್ಕಾರದಿಂದ ಪ್ರೋತ್ಸಾಹಧನ ನೀಡುವ ಬಗ್ಗೆ.

ಶ್ರೀ ಶ್ಯಾಮನೂರು ಶಿವಶಂಕರಪ್ಪ (ತೋಟಗಾರಿಕೆ ಸಚಿವರು) : ಮಾನ್ಯ ಅಧ್ಯಕ್ಷರೆ, ಮೊನ್ನೆ ನಡೆದಂತಹ ಸಭೆಯಲ್ಲಿ ಉಂಡೆ ಕೊಬ್ಬರಿಗೆ ರಾಜ್ಯ ಸರ್ಕಾರದಿಂದ ಪ್ರೋತ್ಸಾಹ ಧನ ನೀಡಬೇಕೆನ್ನುವ ವಿಷಯ ಬಂದಾಗ ಅದರ ಬಗ್ಗೆ ಉತ್ತರ ಕೊಡುತ್ತೇನೆಂದು ತಿಳಿಸಿದ್ದೆನು. ಹಾಗಾಗಿ ಈ ದಿವಸ ಅಂದರೆ ದಿನಾಂಕ: 12.06.2013ರಂದು ಬೆಳಿಗ್ಗೆ 9.30 ಗಂಟೆಗೆ ಸಚಿವ ಸಂಪುಟ ಉಪಸಮಿತಿ ಸಭೆ ನಡೆಸಿ ಈ ಕೆಳಕಂಡಂಥ ನಿರ್ಣಯಗಳನ್ನು ಕೈಗೊಂಡಿರುತ್ತೇವೆಂದು ನಮ್ಮ ಮಾನ್ಯ ಸದಸ್ಯರುಗಳಿಗೆ ತಿಳಿಸುವುದಕ್ಕೆ ಸಂತೋಷಿಸುತ್ತೇನೆ. ಉಂಡೆ ಕೊಬ್ಬರಿಗೆ ಪ್ರತಿ ಕ್ವಿಂಟಾಲ್‌ಗೆ ಒಂದು ಸಾವಿರ ರೂಪಾಯಿ ರಾಜ್ಯ ಸರ್ಕಾರದಿಂದ ಪ್ರೋತ್ಸಾಹ ಧನವನ್ನಾಗಿ ನೀಡಲು ನಿರ್ಧರಿಸಲಾಗಿದೆ ಹಾಗೂ ಕೇಂದ್ರ ಸರ್ಕಾರದ ಬೆಂಬಲ ಬೆಲೆಯಲ್ಲಿ ಪ್ರತಿ ಕ್ವಿಂಟಾಲ್‌ಗೆ 5,500 ರೂಪಾಯಿಗಳು ಹಾಗೂ ರಾಜ್ಯ ಸರ್ಕಾರದ ಪ್ರೋತ್ಸಾಹ ಧನ ಒಂದು ಸಾವಿರ ರೂಪಾಯಿ ಸೇರಿದಂತೆ ಪ್ರತಿ ಕ್ವಿಂಟಾಲ್‌ಗೆ ಉಂಡೆ